# *Form No.4.*

# *Deposition Sheet( R.P.52)*

ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಹೆಚ್ಚುವರಿ ಮುಖ್ಯ
ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಾರ್ಕಳ.

**MVC 1047/2024**

**PW1**

| | | |
|---|---|---|
| ಸಾಕ್ಷಿಯ ಹೆಸರು | ಃ | ರಮೇಶ್ |
| ತಂದೆ ಹೆಸರು | ಃ | ಲಕ್ಷ್ಮಣ ನ್ಾಯಕ |
| ಪ್ರಾಯ | ಃ | 39 ವರ್ಷ |
| ಉದ್ಯೋಗ | ಃ | ಆಟೋ ರಿಕ್ಷಾ ಚಾಲಕ |
| ವಾಸ | ಃ | ಹೆಬ್ರಿ ತಾಲೂಕು. |

ದಿನಾಂಕ **: 06.03.2026** ರಂದು ಪಿಡಬ್ಲ್ಯೂ - 1 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಬಿ.ಎಸ್.ಎಸ್., ಅರ್ಜಿದಾರರ ಪರ ವಕೀಲರಿಂದಃ

1. ನಾನು ಈ ಕೇಸಿನ ಅರ್ಜಿದಾರ. ನನ್ನ ಮುಖ್ಯ ವಿಚಾರಣೆಯ ಬದಲಿಗೆ ನಾನು ಈ ದಿನ ನ್ಯಾಯಾಲಯಕ್ಕೆ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದು , ಸದರಿ ಪ್ರಮಾಣ ಪತ್ರದಲ್ಲಿ ತಿಳಿಸಿರುವ ಅಂಶಗಳು ಸತ್ಯವಾಗಿವೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 1 ಎಂದು, ದೂರಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ನಿಪಿ - 2 ಎಂದು, ಸ್ಥಳ ಮಹಜರಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 3 ಎಂದು, ಕಚ್ಚಾ ನಕ್ಷೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 4 ಎಂದು, ಐಎಮ್‌ವಿ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 5 ಎಂದು, ಕಲಂ 160 ರ ನೋಟೀಸಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 6 ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 7 ಎಂದು, ನನ್ನ ಆಧಾರ್ ಕಾರ್ಡನ್ನು ಮತ್ತು ಅದರ ನೋಟರೀಕೃತ ನಕಲನ್ನು ಹಾಜರುಪಡಿಸಿದ್ದೇನೆ. (ನೋಟರೀಕೃತ ನಕಲನ್ನು ಮೂಲಪ್ರತಿಯೊಂದಿಗೆ ಹೋಲಿಸಿ ನೋಡಿದ ನಂತರ ಮೂಲಪ್ರತಿಯನ್ನು ಸಾಕ್ಷಿಗೆ ಹಿಂತಿರುಗಿಸಲಾಯಿತು). ಆಧಾರ್ ಕಾರ್ಡಿನ ನೋಟರೀಕೃತ ನಕಲನ್ನು ನಿಪಿ - 8 ಎಂದು, ಪೋಲೀಸರು ಸಲ್ಲಿಸಿರುವ ದೋಷಾರೋಪಣಾ ಪಟ್ಟಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 9 ಎಂದು, 40 ಮೆಡಿಕಲ್ ಬಿಲ್ಲುಗಳು ಮತ್ತು ಮುಂಗಡ ರಶೀದಿ, ಅಂಬ್ಯುಲೆನ್ಸ್ ಬಿಲ್ಲುಗಳನ್ನು ಮತ್ತು ಐ.ಪಿ. ಬಿಲ್ಲನ್ನು ಒಟ್ಟಾಗಿ ನಿಪಿ - 10 ಎಂದು, ಚಿಕಿತ್ಸಾ ಪ್ರಮಾಣ ಪತ್ರವನ್ನು ನಿಪಿ - 11 ಎಂದು, ಅಂಗನ್ಯೂನ್ಯತಾ ಪ್ರಮಾಣ ಪತ್ರವನ್ನು ನಿಪಿ - 12 ಎಂದು ಗುರುತಿಸಲಾಯಿತು. ಆದ್ದರಿಂದ ಅರ್ಜಿಯಲ್ಲಿ ಕೋರಿದಂತೆ ಆದೇಶ ಮಾಡಬೇಕಾಗಿ ಪ್ರಾರ್ಥನೆ.

<u>ಪಾಟೀ ಸವಾಲುಃ</u> ಎದುರುದಾರರ ಪರ ವಕೀಲರು ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯಂತೆ ನಾನು ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನ ನೀಡಿದ್ದು, ಅದರಂತೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ

Sd/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎಎಂಎಸಿಟಿ.,

ಕಾರ್ಕಳ.